ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯದಂಡಾಧಿಕಾರಿಯವರ ನ್ಯಾಯಾಲಯ, ಪೊನ್ನಂಪೇಟೆ.

# ಕ್ರಿಮಿನಲ್ ಮೊಕದ್ದಮೆ ಸಂಖ್ಯೆ. 810/ 2017

ಪ್ರಾ.ಸಾ.: 2
ಚಾ.ಸಾ.: 5

| | | |
|---|---|---|
| ಹೆಸರು | : | ನೌಫಲ್ |
| ತಂದೆಯ ಹೆಸರು | : | ಲತೀಫ್ |
| ವಯಸ್ಸು | : | 33 ವರ್ಷ |
| ಉದ್ಯೋಗ | : | ಖಾಸಗಿ ಕೆಲಸ |
| ವಿಳಾಸ | : | ಕುಟ್ಟ, ತೈಲ ಗ್ರಾಮ |

... ........................................................................................................ ...

ದಿನಾಂಕ 28 ನೇ ಜೂನ್ 2024 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ- ಮಾನ್ಯ ಸ ಸ ಅ ರವರಿಂದ : -

ಆರೋಪಿ ಪರಿಚಯವಿದೆ. ನಮ್ಮ ನಡುವೆ ಯಾವುದೇ ಗಲಾಟೆಯಾಗಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಮಾಹಿತಿ ಇಲ್ಲ.

ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದೆ, ಸಾಕ್ಷಿಯು ಗುರುತಿಸಿರುವ ದಾಖಲೆಯು ಸ್ಥಳ ಮಹಜರ್ ಆಗಿದ್ದು ಅದನ್ನು ಈಗ ನಿ ಪಿ 1 ಎಂದು ಈಗಾಗಲೇ ಗುರುತಿಸಲಾಗಿದ್ದು, ಸಾಕ್ಷಿಯ ಸಹಿ ನಿ ಪಿ 1 ಬಿ ಎಂದು ಗುರುತಿಸಲಾಯಿತು. ಕುಟ್ಟ ಪೊ. ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಅವು ಯಾವ ದಾಖಲೆಗಳು, ಅದರಲ್ಲಿ ಏನು ಬರೆದಿರುತ್ತಾರೆ ಎಂದು ಗೊತ್ತಿಲ್ಲ. ನಿ ಪಿ 1 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ, ನಾನು ಪೊಲಿಸರಿಗೆ ಯಾವುದೇ ಕೃತ್ಯ ಸ್ಥಳವನ್ನು ತೋರಿಸಿಲ್ಲ, ಏನನ್ನೂ ಅಮಾನತ್ತುಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ ಹಾಗೂ ಸ.ಸ.ಅ.ರವರ ವಾದವನ್ನು ಆಲಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

ಪಾಟೀ ಸವಾಲು: - ಮಾನ್ಯ ಸ ಸ ಅ ರವರಿಂದ : -

ದಿನಾಂಕ 24.08.2017 ರಂದು ಕುಟ್ಟ ಗ್ರಾಮ ಪಂಚಾಯಿತಿ ಬಳಿ ಮ. 16 ರಿಂದ 16.30 ಗಂಟೆ ಸಮಯದಲ್ಲಿ ಪೊಲೀಸರು ಮಹಜರ್ ಮಾಡಿದರು ಎಂದರೆ ಸರಿಯಲ್ಲ ಹಾಗೂ ಪೊಲೀಸರು ನನ್ನ ಹಾಗೂ ಚಾಸಾ 6 ರವರ ಸಮಕ್ಷಮ ಘಟನಾ ಸ್ಥಳವನ್ನು ಎ ಆರ್ ಮುರಳೀಧರ್‌ರವರು ತೋರಿಸಿದರಂತೆ ಮಹಜರ್ ಮಾಡಿದರು ಎಂದರೆ ಸರಿಯಲ್ಲ. ಆಗ ನಿ ಪಿ 1 ಕ್ಕೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಈಗ ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯವಾಗಲೆಂದು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯೊಂದಿಗೆ ಪ್ರಕರಣ ರಾಜಿ ಮಾಡಿಕೊಂಡಿದ್ದೇನೆ ಎಂದರೆ ಸರಿ.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರು ವಿಚಾರಣೆ : - ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಖ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಗಿರುತ್ತದೆ)

ಓದಿ ಹೇಳಿ ಕೇಳಿಸಿ ಸರಿ ಇದೆ ಎಂದು ಒಪ್ಪಿದೆ.

Sd/xxx-

(ಸಾಕ್ಷಿಯವರ ಸಹಿ)

ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಪೊನ್ನಂಪೇಟೆ.